ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

---

**ಸಂಖ್ಯೆ ಎಡಿಎಂ2(1) ಶೈ.ವ.ನಿ-01/2021-22.** **ದಿನಾಂಕ:04.06.2021**

**ಸುತ್ತೋಲೆ**

ವಿಷಯ:-ರಾಜ್ಯದ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ 2021-22 ನೇ ಸಾಲಿನ ಶೈಕ್ಷಣಿಕ ವರ್ಷ ನಿಗದಿಪಡಿಸುವ ಬಗ್ಗೆ.

ಉಲ್ಲೇಖ:-1. ಈ ಕಚೇರಿ ಸುತ್ತೋಲೆ ಸಂಖ್ಯೆ: ಸಿ4(6) ಶೈ ಮತ್ತು ರಜೆ.ಅ.ನಿಗದಿ-35/2020-21 ದಿನಾಂಕ:20-04-2021 ಮತ್ತು ದಿನಾಂಕ:31-05-2021.

2. ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ 158. ಟಿಎನ್ಆರ್ 2020. ದಿನಾಂಕ:07-05-2021, 21-05-2021 ಮತ್ತು 03-06-2021.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021-22 ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳನ್ನು ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ದಿನಾಂಕ: 15-06-2021 ರಿಂದ ಪ್ರಾರಂಭಿಸಲು ಉಲ್ಲೇಖ-01 ರಂತೆ ಸೂಚಿಸಲಾಗಿತ್ತು. ಪ್ರಸ್ತುತ ಕೋವಿಡ್-19 ಅನ್ನು ನಿಯಂತ್ರಿಸಲು ಉಲ್ಲೇಖ-02 ರಂತೆ ಕಠಿಣ ನಿರ್ಬಂಧಗಳನ್ನು ವಿಧಿಸಲಾಗಿರುವ ಹಿನ್ನಲೆಯಲ್ಲಿ ದಿನಾಂಕ: 14-06-2021 ರವರೆಗೆ ಶಾಲಾ ತರಗತಿಗಳನ್ನು ಪ್ರಾರಂಭಿಸಲು ಅವಕಾಶ ಇರುವುದಿಲ್ಲ.

ಮುಂದುವರೆದು, ಪ್ರಸಕ್ತ ತಲೆದೋರಿರುವ ಈ ಪ್ರತಿಕೂಲ ಸನ್ನಿವೇಶ ಮುಂದುವರೆಯುವ ಸಾಧ್ಯತೆಯನ್ನು ಗಮನದಲ್ಲಿ ಇರಿಸಿಕೊಂಡು ತಾತ್ಕಾಲಿಕವಾಗಿ ದಿನಾಂಕ: 01-07-2021 ರಿಂದ ಅನುಷ್ಠಾನಕ್ಕೆ ಬರುವಂತೆ ರಾಜ್ಯದಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಯೋಜಿಸಲಾಗಿದೆ.

arun hudedagoudra

ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ 2021-22 ನೇ ಶೈಕ್ಷಣಿಕ ಸಾಲಿನಲ್ಲಿ ಏಕರೂಪದ ಶೈಕ್ಷಣಿಕ ಚಟುವಟಿಕೆಗಳನ್ನು ಜಾರಿಗೊಳಿಸಲು ಅನುವಾಗುವಂತೆ, ಶೈಕ್ಷಣಿಕ ಅವಧಿಗಳು, ರಜಾ ದಿನಗಳು ಮತ್ತು ವಾರ್ಷಿಕ ಕಾರ್ಯಸೂಚಿಯನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದ್ದು, ಎಲ್ಲಾ ಶಾಲೆಗಳಲ್ಲಿ ಅನುಷ್ಠಾನಗೊಳಿಸಲು ತಿಳಿಸಿದೆ.

**ಶಾಲಾ ಕರ್ತವ್ಯದ ದಿನಗಳು.**

| | |
|---|---|
| ಮೊದಲನೇ ಅವಧಿ | ದಿನಾಂಕ: 01.07.2021 ರಿಂದ 09.10.2021 |
| ಎರಡನೇ ಅವಧಿ | ದಿನಾಂಕ: 21.10.2021 ರಿಂದ 30.04.2022 |

**ರಜಾ ದಿನಗಳು.**

| | |
|---|---|
| ದಸರಾ ರಜೆ. | ದಿನಾಂಕ:10-10-2021 ರಿಂದ 20-10-2021 |
| ಬೇಸಿಗೆ ರಜೆ | ದಿನಾಂಕ::01.05.2022 ರಿಂದ 28.05.2022 |

Scanned with CamScanner

ಮೇಲ್ಕಂಡಂತೆ 2021–22 ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಶಾಲಾ ಕರ್ತವ್ಯದ ಅವಧಿಯನ್ನು ಮತ್ತು ರಜಾ ಅವಧಿಯನ್ನು ಪರಿಗಣಿಸಿ ನಿಗದಿಪಡಿಸಲಾಗಿರುವ ಮಾಸಿಕ ಶಾಲಾ ಕರ್ತವ್ಯದ (ಬೋಧನಾ) ದಿನಗಳು ಮತ್ತು ರಜಾ ದಿನಗಳ ವಿವರಗಳು ಕೆಳಕಂಡಂತಿದೆ.

| ಕ್ರಸಂ. | ತಿಂಗಳು ಮತ್ತು ವರ್ಷ | ಲಭ್ಯವಿರುವ ತಿಂಗಳಿನ ಒಟ್ಟು ದಿನಗಳು | ಒಟ್ಟು ರಜಾ ದಿನಗಳು. | ಲಭ್ಯವಿರುವ ಶಾಲಾ ಕರ್ತವ್ಯದ ದಿನಗಳು |
|---|---|---|---|---|
| 01 | ಜುಲೈ – 2021 | 31 | 05 | 26 |
| 02 | ಆಗಸ್ಟ್ – 2021 | 31 | 06 | 25 |
| 03 | ಸೆಪ್ಟಂಬರ್ – 2021 | 30 | 05 | 25 |
| 04 | ಅಕ್ಟೋಬರ್ – 2021 | 31 | 15 | 16 |
| 05 | ನವಂಬರ್ – 2021 | 30 | 08 | 22 |
| 06 | ಡಿಸೆಂಬರ್ – 2021 | 31 | 04 | 27 |
| 07 | ಜನವರಿ – 2022 | 31 | 06 | 25 |
| 08 | ಫೆಬ್ರವರಿ – 2022 | 28 | 05 | 23 |
| 09 | ಮಾರ್ಚ್ – 2022 | 31 | 06 | 25 |
| 10 | ಏಪ್ರಿಲ್ – 2022 | 30 | 06 | 24 |
| | ಒಟ್ಟು | 304 | 66 | 238 |
| | ವಿವೇಚನಾ ರಜೆಗಳು (ಸ್ಥಳೀಯ ರಜೆಗಳು) | | | –04 |
| | ದಸರಾ ರಜೆ | | | –11 |
| | ಶೈಕ್ಷಣಿಕ ಸಾಲಿನಲ್ಲಿ ಬೋಧನಾ–ಕಲಿಕೆ ಪ್ರಕ್ರಿಯೆಗೆ ಲಭ್ಯವಾಗುವ ಒಟ್ಟು ಶಾಲಾ ಕರ್ತವ್ಯದ ದಿನಗಳು | | | 223 |

**ನಿಬಂಧನೆಗಳು:**

1. ಮಕ್ಕಳ ಶಾಲಾ ಪ್ರವೇಶಾತಿಯನ್ನು / ದಾಖಲಾತಿಯನ್ನು ಜೂನ್ 15 ರಿಂದ ಆರಂಭಿಸಿ ದಿನಾಂಕ: 31–08–2021 ರೊಳಗಾಗಿ ಮುಕ್ತಾಯಗೊಳಿಸತಕ್ಕದ್ದು.
2. ಕೋವಿಡ್–19 ರ ಪ್ರತಿಕೂಲ ಸನ್ನಿವೇಶದ ಹಿನ್ನಲೆಯಲ್ಲಿ ಶಾಲೆಗಳನ್ನು ಭೌತಿಕವಾಗಿ ಪ್ರಾರಂಭಿಸಲು ಪರಿಸ್ಥಿತಿ ಸಹಕಾರಿಯಾಗದಿದ್ದಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪರ್ಯಾಯ ಮಾರ್ಗಗಳನ್ನು (ದೂರದರ್ಶನ, ಸಂವೇದ, ಬಾನುಲಿ, ಆನ್–ಲೈನ್ ಮತ್ತು ಇತರ ಆಫ್–ಲೈನ್ ಮಾರ್ಗಗಳ ಮುಖಾಂತರ) ಚಾಲನೆಗೊಳಿಸುವುದರ ಮೂಲಕ ಮಕ್ಕಳು ಪಾಠ–ಪ್ರವಚನಗಳಲ್ಲಿ ಪಾಲ್ಗೊಳ್ಳುವ ಮೂಲಕ ಕಲಿಕೆ ಮತ್ತು ಮೌಲ್ಯಮಾಪನ ಕಾರ್ಯದ ನಿರಂತರತೆಯನ್ನು ಕಾಯ್ದುಕೊಳ್ಳತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿಸಬಾರದು. ಪರ್ಯಾಯ ಮಾರ್ಗಗಳ ಮೂಲಕ ಶಿಕ್ಷಣ ನೀಡುವ ಕುರಿತು ವಿವರವಾದ ಮಾರ್ಗಸೂಚಿಯನ್ನು ನಂತರದಲ್ಲಿ ಹೊರಡಿಸಲಾಗುವುದು. ಮಕ್ಕಳ ಕಲಿಕೆಯ ಯೋಜನೆಯ ಪೂರ್ವತಯಾರಿಯನ್ನು ದಿನಾಂಕ: 15.06.2021 ರಿಂದ ಶಿಕ್ಷಕರು ಪ್ರಾರಂಭಿಸುವುದು.
3. ಪ್ರಾಥಮಿಕ ಶಾಲಾ ಸಮುದಾಯದತ್ತ ಶಾಲೆ ಕಾರ್ಯಕ್ರಮವನ್ನು ದಿನಾಂಕ:29–04–2022 ರಂದು ಹಾಗೂ ಪ್ರೌಢ ಶಾಲಾ ಸಮುದಾಯದತ್ತ ಶಾಲೆ ಕಾರ್ಯಕ್ರಮವನ್ನು ದಿನಾಂಕ:30–04–2022 ರಂದು ನಡೆಸುವುದು.

arun hudedagoudra

Scanned with CamScanner

4. ರಾಷ್ಟ್ರೀಯ ಹಬ್ಬಗಳಾದ ಗಣರಾಜ್ಯೋತ್ಸವ, ಸ್ವಾತಂತ್ರ್ಯ ದಿನಾಚರಣೆ, ಗಾಂಧಿ ಜಯಂತಿ, ಡಾ || ಬಿ.ಆರ್. ಅಂಬೇಡ್ಕರ್ ಜಯಂತಿ, ನಾಡ ಹಬ್ಬವಾದ ಕರ್ನಾಟಕ ರಾಜ್ಯೋತ್ಸವ ಮುಂತಾದವುಗಳನ್ನು ಆಯಾ ದಿನಗಳಂದು ಶಾಲೆಗಳಲ್ಲಿ ಕಡ್ಡಾಯವಾಗಿ ಆಚರಿಸುವುದು.
5. ಕ್ರಿಸ್‌ಮಸ್ ರಜೆ ಬೇಡಿಕೆಯನ್ನು ಸಂಬಂಧಿಸಿದ ಶಿಕ್ಷಣ ಸಂಸ್ಥೆಗಳು ತಮ್ಮ ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಸಲ್ಲಿಸಿದಲ್ಲಿ ಈ ಬಗ್ಗೆ ಆಯಾ ಉಪನಿರ್ದೇಶಕರು(ಆಡಳಿತ) ರವರು ಆ ಕುರಿತು ಪರಿಶೀಲಿಸಿ ನಿರ್ಧರಿಸುವುದು. ಡಿಸೆಂಬರ್ ಮಾಹೆಯಲ್ಲಿ ನೀಡುವ ಕ್ರಿಸ್‌ಮಸ್ ರಜಾ ಅವಧಿಯನ್ನು ಅಕ್ಟೋಬರ್ ಮಾಹೆಯ ಮಧ್ಯಂತರ ರಜೆಯಲ್ಲಿ ಕಡಿತಗೊಳಿಸಿ ಸರಿದೂಗಿಸಿಕೊಳ್ಳಲು ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರು ಕ್ರಮವಹಿಸತಕ್ಕದ್ದು.
6. ರಾಜ್ಯ ಮಟ್ಟದ ಕನ್ನಡ ರಾಜ್ಯೋತ್ಸವ ಮತ್ತು ಮಕ್ಕಳ ಮೇಳ ಕಾರ್ಯಕ್ರಮಗಳನ್ನು ಆಯೋಜಿಸುವ ಬೆಂಗಳೂರು ಉತ್ತರ ಹಾಗೂ ದಕ್ಷಿಣ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) ರವರು ತಮ್ಮ ವ್ಯಾಪ್ತಿಯ ಶಾಲೆಗಳಿಗೆ ದಸರಾ ಮಧ್ಯಂತರ ರಜಾ ಅವಧಿಯನ್ನು ಅವಶ್ಯಕತೆಗನುಗಣವಾಗಿ ಮಾರ್ಪಡಿಸಿಕೊಳ್ಳುವುದರ ಮೂಲಕ ಶಾಲಾ ಕರ್ತವ್ಯದ ಅವಧಿಗಳ ಕೊರತೆ ಬಾರದ ರೀತಿಯಲ್ಲಿ ಕ್ರಮವಹಿಸತಕ್ಕದ್ದು.
7. ಮುಷ್ಕರ ಇನ್ನಿತರೆ ಅನಿರೀಕ್ಷಿತ ಕಾರಣಗಳಿಂದಾಗಿ ಶಾಲೆಗಳಿಗೆ ರಜೆ ಘೋಷಣೆಯಾದಲ್ಲಿ ಆ ಅವಧಿಯ ಶಾಲಾ ಕರ್ತವ್ಯದ ದಿನಗಳನ್ನು ಮುಂದಿನ ರಜಾ ದಿನಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಶಾಲೆಗಳನ್ನು ನಡೆಸುವುದರ ಮೂಲಕ ನಿಗದಿಪಡಿಸಿದ ಶಾಲಾ ಕರ್ತವ್ಯದ ದಿನಗಳು ಕಡಿಮೆಯಾಗದಂತೆ ಸರಿದೂಗಿಸಿಕೊಳ್ಳಲು ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರು ಕ್ರಮ ವಹಿಸುವುದು.
8. ಪರೀಕ್ಷಾ ದಿನಗಳು, ಮೌಲ್ಯಾಂಕನ ದಿನಗಳು ಹಾಗೂ ಪೂರಕ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುವ ದಿನಗಳನ್ನು ಕೂಡ ಶಾಲಾ ಕರ್ತವ್ಯದ ದಿನಗಳೆಂದು ನಿಗದಿತ ಅವಧಿಗಳಲ್ಲಿ ಪರಿಗಣಿಸುವುದು.
9. ಕೋವಿಡ್–19 ರ ಪ್ರತಿಕೂಲ ಸನ್ನಿವೇಶದ ಹಿನ್ನಲೆಯಲ್ಲಿ 2021–22 ನೇ ಶೈಕ್ಷಣಿಕ ಸಾಲಿನಲ್ಲಿ ಶಾಲೆಗಳನ್ನು ಭೌತಿಕವಾಗಿ ನಡೆಸಲು ಸಾಧ್ಯವಾಗದಿದ್ದಲ್ಲಿ ಸರ್ಕಾರದ / ಇಲಾಖೆಯ ಸೂಚನೆಯನುಸಾರ ಪರ್ಯಾಯ ಮಾರ್ಗಗಳನ್ನು ಕೈಗೊಳ್ಳುವುದರ ಮೂಲಕ ಶೈಕ್ಷಣಿಕವಾಗಿ ಹಿನ್ನಡೆಯಾಗದಂತೆ ಮೇಲ್ಕಂಡ ವಾರ್ಷಿಕ ಶೈಕ್ಷಣಿಕ ಚಟುವಟಿಕೆಗಳ ಕಾರ್ಯಸೂಚಿಯನ್ನು ಅನುಷ್ಠಾನಗೊಳಿಸುವುದು.

arun hudedagoudra

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ/ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.

ಪ್ರತಿಯನ್ನು:–

1. ಮಾನ್ಯ ಘನತೆವೆತ್ತ ರಾಜ್ಯಪಾಲರ ಆಪ್ತ ಕಾರ್ಯದರ್ಶಿ ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹು ಮಹಡಿಗಳ ಕಟ್ಟಡ,ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.

Scanned with CamScanner

4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ರವರಿಗೆ ಮಾಹಿತಿಗಾಗಿ,
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿರವರಿಗೆ ಕ್ರಮಕ್ಕಾಗಿ.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
8. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು ರವರಿಗೆ.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಂಶುಪಾಲರ ಮತ್ತು ಪ್ರೌಢ ಶಾಲಾ ಮುಖ್ಯಶಿಕ್ಷಕರ ಸಂಘ ಬೆಂಗಳೂರು.
10. ಅಧ್ಯಕ್ಷರು, ಕರ್ನಾಟಕ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ, ಬೆಂಗಳೂರು
11. ಅಧ್ಯಕ್ಷರು, ಕರ್ನಾಟಕ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಬೆಂಗಳೂರು
12. ಸಾರ್ವಜನಿಕ ಸಂಪರ್ಕಾಧಿಕಾರಿಗಳು ಆಯುಕ್ತರ ಕಛೇರಿ, ಸಾರ್ವನಿಕ ಶಿಕ್ಷಣ ಇಲಾಖೆ, ಬೆಂಗಳೂರು
13. ಕಛೇರಿ ಪ್ರತಿ.

Scanned with CamScanner

ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ.:ಸಿ7[2] ಪ್ರಾಶಿಅ.ಖಾ.ಶಾಲಾ.ಮ.ದಾ.& ಶುಲ್ಕ. 03/2021-22 ದಿನಾಂಕ:04-06-2021

## ಸುತ್ತೋಲೆ

ವಿಷಯ: ಖಾಸಗಿ ಅನುದಾನಿತ /ಅನುದಾನರಹಿತ ಶಾಲೆಗಳಲ್ಲಿ 2021-22ನೇ ಶೈಕ್ಷಣಿಕ ಸಾಲಿಗೆ ದಾಖಲಾತಿ ಮತ್ತು ಶುಲ್ಕ ಪಡೆಯುವ ಬಗ್ಗೆ.

ಉಲ್ಲೇಖ: 1. ಕರ್ನಾಟಕ ಶಿಕ್ಷಣ ಕಾಯ್ದೆ-1983 ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯಕ್ರಮ ನಿಗಧಿ ಇತ್ಯಾದಿ) ನಿಯಮಗಳು-1995

2. ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ-2009 ನಿಯಮಗಳು-2012
3. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.31.ಪಿಜಿಸಿ.2019, ದಿನಾಂಕ:24-7-2019
4. ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ4[6] ಶೈ ಮತ್ತು ರಜೆ.ಅ.ನಿಗಧಿ.35/2020-21 ದಿನಾಂಕ:20-4-2021 ಮತ್ತು 31-05-2021.
5. ಈ ಕಛೇರಿ ಸುತ್ತೋಲೆ ಸಂಖ್ಯೆ: ಎಡಿಎಂ2(1)ಶೈ.ವ.ನಿ-01/2021-22. ದಿನಾಂಕ: 04-06-2021..

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸಾಮಾನ್ಯ ವರ್ಷಗಳಲ್ಲಿ ಉಲ್ಲೇಖ[1]ರ ಅನ್ವಯ ಖಾಸಗಿ ಅನುದಾನಿತ / ಅನುದಾನರಹಿತ ಶಾಲೆಗಳಲ್ಲಿ ಪ್ರತಿ ಶೈಕ್ಷಣಿಕ ವರ್ಷದ ಹೊಸ ದಾಖಲಾತಿ ಪ್ರಕ್ರಿಯೆಯು ಈಗ ಪ್ರಾರಂಭವಾಗುತ್ತಿತ್ತು. ಆದರೆ ಕೋವಿಡ್-19 ಮುಂದುವರೆದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಶಾಲಾ ಕಾಲೇಜುಗಳನ್ನು ನಿಗಧಿತ ಸಮಯಕ್ಕೆ ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ. ಭೌತಿಕವಾಗಿ ಶಾಲೆಗಳ ಪುನರಾರಂಭದ ಕುರಿತು ಅನಿಶ್ಚಿತತೆ ಇರುವುದರಿಂದ ಮಕ್ಕಳನ್ನು ಪರ್ಯಾಯ ಮಾರ್ಗವಾಗಿ ಸಂಪರ್ಕಿಸಿ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕಾಗಿರುತ್ತದೆ.

ಪ್ರಸ್ತುತ ಸನ್ನಿವೇಶದಲ್ಲಿ ಮಕ್ಕಳನ್ನು ಪರ್ಯಾಯ ಮಾರ್ಗಗಳ ಮೂಲಕ ಶೈಕ್ಷಣಿಕ ಚಟುವಟಿಕೆಯಲ್ಲಿ ತೊಡಗಿಸದೇ ಇದ್ದಲ್ಲಿ ಅವರು ಕಲಿಕೆಯಲ್ಲಿ ಆಸಕ್ತಿಯನ್ನು ಕಳೆದುಕೊಳ್ಳುವ ಸಂಭವವಿದ್ದು ಶಾಲೆಯಿಂದ ಹೊರಗುಳಿಯುವ ಸಾಧ್ಯತೆ ಇರುತ್ತದೆ. ಇಂತಹ ಕೆಲವು ಮಕ್ಕಳು ಬಾಲ ಕಾರ್ಮಿಕತೆ, ಬಾಲ್ಯವಿವಾಹ ಅಥವಾ ದುಶ್ಚಟಗಳಿಗೆ ಗುರಿಯಾಗುವ ಸಂಭವವಿರುತ್ತದೆ. ಆದುದರಿಂದ ಎಲ್ಲಾ ಮಕ್ಕಳನ್ನು ಶೈಕ್ಷಣಿಕ ಚಟುವಟಿಕೆಯಲ್ಲಿ ತೊಡಗಿಸಿ ಅವರಿಗೆ ಮನೋಸ್ಥೈರ್ಯವನ್ನು ಹೆಚ್ಚಿಸುವ ಹಾಗೂ ನಿರಂತರ ಕಲಿಕೆಯಲ್ಲಿ ತೊಡಗಿಸಿಕೊಳ್ಳುವಂತೆ ಮಾಡುವುದು ಅತ್ಯವಶ್ಯಕವಾಗಿದೆ.

ಆದುದರಿಂದ ಪ್ರಸ್ತುತ ಉಲ್ಲೇಖ-05 ರಂತೆ 2021-22ನೇ ಸಾಲಿನ ಶೈಕ್ಷಣಿಕ ವರ್ಷದ ವಾರ್ಷಿಕ ಯೋಜನೆಯಂತೆ ಜುಲೈ-01 ರಿಂದ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ ಯೋಜಿಸಿದ ಹಿನ್ನೆಲೆಯಲ್ಲಿ ಮಕ್ಕಳ ಶಾಲಾ ಪ್ರವೇಶ ದಾಖಲಾತಿ ಪ್ರಕ್ರಿಯೆಯನ್ನು ಕೆಳಕಂಡಂತೆ ಪ್ರಾರಂಭಿಸುವುದು.

arun hudedagoudra

ಶಾಲಾ ದಾಖಲಾತಿಗೆ ತರಗತಿವಾರು ಲಭ್ಯವಿರುವ ಸೀಟುಗಳ ಸಂಖ್ಯೆ, ಪ್ರವೇಶ ಪ್ರಕ್ರಿಯೆ ಪ್ರಕಟಣೆ, ತರಗತಿವಾರು ಪಾವತಿಸಬೇಕಾದ ಶುಲ್ಕದ ವಿವರಗಳನ್ನು ಒಳಗೊಂಡಂತೆ ಶಾಲಾ ಪ್ರವೇಶಕ್ಕೆ ಪೂರಕ ಮಾಹಿತಿಗಳನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ, ದಾಖಲಾತಿ ಪ್ರಕ್ರಿಯೆಯನ್ನು ಜೂನ್-15 ರಿಂದ ಪ್ರಾರಂಭಿಸಿ ಆಗಸ್ಟ್-31 ರೊಳಗೆ ಮುಕ್ತಾಯಗೊಳಿಸುವುದು. ದಾಖಲಾತಿಗಾಗಿ ಶಾಲೆಯ ಆವರಣದಲ್ಲಿ ಮಕ್ಕಳು ಹಾಗೂ ಪೋಷಕರನ್ನು ಒಗ್ಗೂಡಿಸದಂತೆ ಕೋವಿಡ್-19ರ ಸುರಕ್ಷತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿ ದಾಖಲಾತಿ ಮುಂದುವರೆಸುವುದು ಹಾಗೂ ಶಾಲೆಗಳಲ್ಲಿ ತರಗತಿಗಳನ್ನು ಭೌತಿಕವಾಗಿ ಮುಂದಿನ ಆದೇಶದವರೆಗೆ ಪ್ರಾರಂಭಿಸಬಾರದೆಂದು ಸೂಚಿಸಿದೆ.

Scanned with CamScanner

ಒಂದು ವೇಳೆ ಶಾಲೆಗಳಲ್ಲಿ ತರಗತಿಗಳನ್ನು ಮಕ್ಕಳಿಗೆ ಭೌತಿಕವಾಗಿ ಪ್ರಾರಂಭಿಸಲು ಸಾಧ್ಯವಾಗದಿದ್ದಲ್ಲಿ ಪರ್ಯಾಯ ಶಿಕ್ಷಣ ಮುಖೇನ ಅಂದರೆ ತರಗತಿವಾರು ಆನ್–ಲೈನ್ / ಆಫ್–ಲೈನ್ ಶಿಕ್ಷಣವನ್ನು, ದೂರದರ್ಶನ, ಸಂವೇದ, ಬಾನುಲಿ, ಯೂಟ್ಯೂಬ್, ವಾಟ್ಸಾಪ್, ಡೆಸ್ಕ್ ಟಾಪ್, ಟ್ಯಾಬ್, ಮೊಬೈಲ್ ಇತರ ವಿದ್ಯುನ್ಮಾನ ಸಾಮಗ್ರಿಗಳ ಮುಖೇನ ಮುದ್ರಿತ ಪಾಠಗಳನ್ನು ಪ್ರಸಾರ ಮಾಡುವುದು, ಅಗತ್ಯಾನುಸಾರ ದೀಕ್ಷಾ ಪೋರ್ಟಲ್ ನಲ್ಲಿ ಲಭ್ಯವಿರುವ ಪಾಠಗಳನ್ನು / ಚಟುವಟಿಕೆಗಳನ್ನು ಮತ್ತು ವರ್ಕ್ ಬುಕ್ / ವರ್ಕ್ ಶೀಟ್ ಮತ್ತು ಸ್ವಕಲಿಕೆ ಸಾಮಗ್ರಿ ಬಳಸಿಕೊಂಡು ಬೋಧನಾ ಕಲಿಕಾ ಪ್ರಕ್ರಿಯೆಯನ್ನು ಮುಂದುವರೆಸುವುದು. ಈ ಕುರಿತು ಇಲಾಖೆ (ಡಿ.ಎಸ್.ಇ.ಆರ್.ಟಿ) ಯಿಂದ ಹೊರಡಿಸಿದ ಸುತ್ತೋಲೆಯನ್ನು ಗಮನಿಸುವುದು.

ಈ ಮೇಲ್ಕಂಡಂತೆ 2021–22 ನೆ ಸಾಲಿನ ಶೈಕ್ಷಣಿಕ ವರ್ಷದ ಚಟುವಟಿಕೆಗಳನ್ನು ಪ್ರಾರಂಭಿಸಲು ಸೂಚಿಸಿದೆ. ಮುಂದುವರೆದು, ಕೋವಿಡ್–19 ರ ಹಿನ್ನಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ / ಇಲಾಖೆ ಹೊರಡಿಸುವ ಮಾರ್ಗಸೂಚಿಗಳಂತೆ ಆಗಬಹುದಾದ ಬದಲಾವಣೆಗಳಿಗೆ ಈ ಆದೇಶ ಒಳಪಟ್ಟಿರುತ್ತದೆ.

arun hudedagoudra

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) & (ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ ಮತ್ತು ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳ ಮೂಲಕ ವ್ಯಾಪಕ ಪ್ರಚಾರ ನೀಡುವುದರ ಮೂಲಕ ತಮ್ಮ ವ್ಯಾಪ್ತಿಯಲ್ಲಿನ ಶಾಲೆಗಳ ಮುಖ್ಯಸ್ಥರ ಗಮನಕ್ಕೆ ತರುವುದು.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಖಾಸಗಿ ಅನುದಾನರಹಿತ ಶಾಲೆಗಳ ಆಡಳಿತ ಮಂಡಳಿ ಮತ್ತು ಮುಖ್ಯ ಶಿಕ್ಷಕರ ಸೂಕ್ತ ಕ್ರಮಕ್ಕಾಗಿ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ.

ಪ್ರತಿಯನ್ನು ಮಾಹಿತಿಗಾಗಿ:–

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಕಲಬುರ್ಗಿ ಮತ್ತು ಧಾರವಾಡ, ಸಾರ್ವಜನಿಕ ಶಿಕ್ಷಣ ಇಲಾಖೆ.
3. ಇಲಾಖೆಯ ಎಲ್ಲಾ ನಿರ್ದೇಶಕರಿಗೆ.
4. ಕಛೇರಿ ಪ್ರತಿ.

Scanned with CamScanner